**ಓ.ಎಸ್.43/2022, ಪಿ.ಡಬ್ಲ್ಯೂ:1 ಹೆಸರು: ಎನ್.ಸೌಭಾಗ್ಯ**

**ದಿ:23-09-2024 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ: ವಾದಿಯ ಪರ ಶ್ರೀ ಕೆ.ಬಿ.ಸಿ. ವಕೀಲರಿಂದ:**

ನಾನು ನನ್ನ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಇದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ. ಪ್ರಮಾಣ ಪತ್ರದಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತದೆ.

ನಮ್ಮ ಕುಟುಂಬಕ್ಕೆ ಸಂಬಂಧಿಸಿದ ವಂಶವೃಕ್ಷಗಳನ್ನು ಹಾಜುರುಪಡಿಸಿದ್ದು ಅದನ್ನು ನಿಪಿ.1 ಮತ್ತು 2 ಎಂದು ಗುರುತಿಸಲಾಯಿತು. ನನ್ನ ತಾಯಿಗೆ ಸಂಬಂಧಿಸಿದ ಮರಣ ಪ್ರಮಾಣ ಪತ್ರದ ಗಣಕೀಕೃತ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ದಾವಾ ಅನುಸೂಚಿ ನಂ.1 ರಿಂದ 13 ನೇ ಖಂಡಿಕೆಯ ಸ್ವತ್ತುಗಳಿಗೆ ಸಂಬಂಧಿಸಿದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.4 ರಿಂದ 16 ಎಂದು ಗುರುತಿಸಲಾಯಿತು. ದಾವಾ ಅನುಸೂಚಿತ 14 ರಿಂದ 16 ನೇ ಖಂಡಿಕೆಗೆ ಸಂಬಂಧಿಸಿದ ಆಸ್ತಿ ತೆರಿಗೆ ರಿಜಿಸ್ಟರ್ ದೃಡೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.17 ರಿಂದ 19 ಎಂದು ಗುರುತಿಸಲಾಯಿತು. ದಿ.27.09.2005 ರ ನೊಂದಣಿ ವಿಭಾಗ ಪತ್ರದ ಗಣಕೀಕೃತ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.20 ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗಾಗಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ